**ದಿವಾಣಿ ನ್ಯಾಯಾಧೀಶರು ಮತ್ತು ಜೆಎಮ್‌ಎಫ್‌ಸಿ, ಸಂಚಾರಿ ನ್ಯಾಯಾಲಯ ,**

**ರಟ್ಟಿಹಳ್ಳಿ**

**ಕ್ರಿಮಿನಲ್ ಮೊಕದ್ದಮೆ ನಂಃ 297/2018**

**ಸಿ.ಡಬ್ಲ್ಯೂ-18 ಪಿ.ಡಬ್ಲ್ಯೂ-10**

ಸಾಕ್ಷಿಯ ಹೆಸರು ಃಉಮಾಪತಿ

ತಂದೆಯ ಹೆಸರು ಃಃಸೀನಪ್ಪ

ವಯಸ್ಸು ಃಃ67 ವರ್ಷ

ಉದ್ಯೋಗ ಃನಿವೃತ್ತ ಸಿ ಪಿ ಐ

ವಾಸಸ್ಥಳ ಃಗೌತಮಪುರ, ತಾಃ ಸಾಗರ.

ದಿನಾಂಕಃ 23-06-2026 ರಂದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಸಅ ರವರಿಂದಃ**

ದಿ: 21.03.2018 ರಿಂದ ದಿನಾಂಕ 18.06.2018 ರವರೆಗೆ ನಾನು ಹಿರೇಕೆರೂರು ವೃತ್ತದಲ್ಲಿ ಸಿ ಪಿ ಐ ಅಂತಾ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ. 21.03.2018 ರಂದು ಚಾಸಾ-17 ರವರಿಂದ ಪ್ರಕರಣದ ಕಡತವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ ದಿನಾಂಕ 07.04.2018 ರಂದು ಹಾವೇರಿ ಆರ್ ಟಿ ಒ ಕಚೇರಿಯಿಂದ ಐ ಎಮ್ ವಿ ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ನಂತರ ಚಾಸಾ-7 ರವರು ಠಾಣೆಗೆ ಹಾಜರಾಗಿ ನೀಡಿದ ದಾಖಲೆಗಳನ್ನು ಪರಿಶೀಲಿಸಿ ನಷ್ಟ ಭರ್ತಿ ಪ್ರಮಾಣ ಪತ್ರವನ್ನು ಪಡೆದುಕೊಂಡು ಆಟೋವನ್ನು ಬಿಡುಗಡೆಗೊಳಿಸಿರುತ್ತೇನೆ. ನಂತರ ನನಗೆ ವರ್ಗಾವಣೆಯಾದ ಪ್ರಯುಕ್ತ ಸದರಿ ಪ್ರಕರಣದ ಕಡತವನ್ನು ಚಾಸಾ-19 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಸಿ.ಡಬ್ಲ್ಯೂ-18 ಪಿ.ಡಬ್ಲ್ಯೂ-10**

ಸಾಕ್ಷಿಗೆ ನಷ್ಟ ಭರ್ತಿ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-15 ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-15(ಬಿ) ಎಂದು ಗುರುತಿಸಲಾಯಿತು.

ಐ ಎಮ್ ವಿ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-27 ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-27(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತನ ಪರ ಶ್ರೀ. ಎಸ್ ಹೆಚ್ ಪಿ ವಕೀಲರಿಂದ:**

ದಿನಾಂಕ 07.04.2018 ರಂದು ಹಾವೇರಿ ಆರ್ ಟಿ ಒ ಕಚೇರಿಯಿಂದ ಐ ಎಮ್ ವಿ ವರದಿಯನ್ನು ಪಡೆದುಕೊಂಡು ನಂತರ ಚಾಸಾ-7 ರವರು ಠಾಣೆಗೆ ಹಾಜರಾಗಿ ನೀಡಿದ ದಾಖಲೆಗಳನ್ನು ಪರಿಶೀಲಿಸಿ ನಷ್ಟ ಭರ್ತಿ ಪ್ರಮಾಣ ಪತ್ರವನ್ನು ಪಡೆದುಕೊಂಡು ಆಟೋವನ್ನು ಬಿಡುಗಡೆಗೊಳಿಸಿ, ನಂತರ ನನಗೆ ವರ್ಗಾವಣೆಯಾದ ಪ್ರಯುಕ್ತ ಸದರಿ ಪ್ರಕರಣದ ಕಡತವನ್ನು ಚಾಸಾ-19 ರವರಿಗೆ ವಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ.

**Sd/-**

ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ,
ಸಂಚಾರಿ ನ್ಯಾಯಾಲಯ, ರಟ್ಟಿಹಳ್ಳಿ